ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-234338

**CHAMUNDESHWARI ELECTRICITY SUPPLY CORPORATION LIMITED**
*(A Government of Karnataka Undertaking)*
Corporate Office,
CESC, Mysuru-570017
**Web Site: www.cescmysore.org.**
E-mail ID:gmhrd@cescmysore.org

Company Identity Number[CIN]:- **U40109KA2004SGC035177**

ಕ್ರಮಾಂಕ : ಸೆಸ್ಕ/ಆ&ಮಾಸಂ/02/ಎಂ.ಎಫ್-26/ಇ-73364/2023-24/CYS 672 ದಿನಾಂಕ: 19 AUG 2023

**ಸುತ್ತೋಲೆ**

ವಿಷಯ: ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು, ನಿರ್ವಹಣಾ ಸಿಬ್ಬಂದಿಗಳು ಹಾಗೂ ಮೇಲ್ವಿಚಾರಣ ಅಧಿಕಾರಿಗಳು ನಿಗದಿತ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಸೆಸ್ಕ/ಆ&ಮಾಸಂ/02/ಎಂ.ಎಫ್-26/2021-22 ಸಿವೈಎಸ್-2035 ದಿನಾಂಕ:23.03.2022.
2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಸು-ತಪಾಸಣೆ) ಬೆಂಗಳೂರುರವರ ಅನಧಿಕೃತ ಟಿಪ್ಪಣಿ ಸಂಖ್ಯೆ:ಸಿಆಸುಇ (ಆಸು) 49 ಕತವ 2023 ದಿನಾಂಕ: 27.06.2023

****** -

**ವಿಷಯಕ್ಕೆ ಸಂಬಂಧಿಸಿದಂತೆ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರಲ್ಲಿ ಹಾಜರಾತಿ ಮತ್ತು ಸಮಯ ಪ್ರಜ್ಞೆ ಮೂಡಿಸುವ ಬಗ್ಗೆ ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿದೆ.**

1. ಕಛೇರಿಗೆ ನೌಕರರು ಬೆಳಿಗ್ಗೆ 10:00 ಗಂಟೆಯೊಳಗೆ ಹಾಜರಾಗುವುದು ಹಾಗೂ ಸಂಜೆ 5:30ರ ನಂತರ ಕಛೇರಿ ಬಿಡುವುದು ಹಾಗೂ ಕಛೇರಿ ವೇಳೆಯಲ್ಲಿ ತಮ್ಮ ಸ್ಥಾನಗಳಲ್ಲಿ ಸಮಯ ಪ್ರಜ್ಞೆ ಮೂಡಿಸುವ ಬಗ್ಗೆ ಈ ಕೆಳಕಂಡಂತೆ ಸೂಚನೆಗಳನ್ನು ನೀಡಲಾಗಿದೆ.
2. ಚಾವಿಸನಿನಿಯ ಎಲ್ಲಾ ಕಛೇರಿಗಳ ನೌಕರರಿಗೂ (10:00 ರಿಂದ 5:30ರ) ಹಾಜರಾತಿ ಸಲುವಾಗಿ ಏಕರೂಪ ಸಮಯವನ್ನು ಪಾಲಿಸುವಂತೆ ಸೂಚಿಸಲಾಗಿದೆ.
3. ಚಾವಿಸನಿನಿಯ ಎಲ್ಲಾ ಕಛೇರಿಗಳಲ್ಲಿ ಮೇಲಾಧಿಕಾರಿಗಳು ಹಾಜರಾತಿಯನ್ನು ಕಟ್ಟುನಿಟ್ಟಾಗಿ ಭೌದ್ಧಿಕವಾಗಿ ಅಥವಾ LOG SAFE ತಂತ್ರಾಂಶದಲ್ಲಿ ಪರಿಶೀಲಿಸುವುದು.
4. ಚಾವಿಸನಿನಿಯ ಎಲ್ಲಾ ನೌಕರರು ಕಛೇರಿಯ ಸಮಯವನ್ನು ಕಟ್ಟುನಿಟ್ಟಾಗಿ ಪರಿಪಾಲನೆ ಮಾಡುವುದು (10:00 ರಿಂದ 5:30)
5. ಕಛೇರಿಗೆ ತಡವಾಗಿ ಬರುವ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳುವ ಸಂದರ್ಭದಲ್ಲಿ ಕಛೇರಿಗೆ ತಡವಾಗಿ ಹಾಜರಾದ/ಮುಂಚಿತವಾಗಿ ಕಛೇರಿಯಿಂದ ಹೊರಡುವ ಸಿಬ್ಬಂದಿಗಳ ವಿರುದ್ಧ ದಿನಗಳ ಆಧಾರದ ಮೇಲೆ ನೌಕರರ ಲೆಕ್ಕದಲ್ಲಿರುವ (ಸಾಂದರ್ಭಿಕ/ಗಳಿಕೆ/ಪರಿವರ್ತಿತ) ರಜೆಗಳನ್ನು ಕಡಿತಗೊಳಿಸಲು ಕ್ರಮ ಕೈಗೊಳ್ಳುವುದು.
6. ನೌಕರರಲ್ಲಿ ಸಮಯ ಪ್ರಜ್ಞೆ ಮೂಡಿಸುವ ಸಲುವಾಗಿ ಸಕ್ಷಮ ಪ್ರಾಧಿಕಾರಿಗಳು ಆಗಿಂದಾಗ್ಗೆ ಅನಿರೀಕ್ಷಿತ ಹಾಜರಾತಿಯ ತಪಾಸಣೆಗಳನ್ನು ಕೈಗೊಳ್ಳುವುದು.

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು.

**ಪ್ರತಿಗಳು:**

1. ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ). ಚಾವಿಸನಿನಿ, ಮೈಸೂರು.
2. ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನ.
3. ಎಲ್ಲಾ ಪ್ರಧಾನ ವ್ಯವಸ್ಥಾಪಕರು, ನಿಗಮ ಕಾರ್ಯಾಲಯ, ಚಾವಿಸನಿನಿ, ಮೈಸೂರು.
4. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿರವರು ಸುತ್ತೋಲೆಯಲ್ಲಿ ಸೂಚಿಸಿರುವಂತೆ ಕ್ರಮ ವಹಿಸುವುದು.
5. ಕಂಪನಿ ಕಾರ್ಯದರ್ಶಿ, ನಿಗಮ ಕಾರ್ಯಾಲಯ, ಚಾವಿಸನಿನಿ, ಮೈಸೂರು.
6. ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್. ಶಾಖೆ,) ನಿಗಮ ಕಛೇರಿ, ನಿಗಮದ ವೆಬ್‌ಸೆಟ್ ನಲ್ಲಿ ಪ್ರಕಟಿಸಲು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿರವರು ಸುತ್ತೋಲೆಯಲ್ಲಿ ಸೂಚಿಸಿರುವಂತೆ ಕ್ರಮ ವಹಿಸುವುದು.
8. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ಉಪವಿಭಾಗ, ಚಾವಿಸನಿನಿರವರು ಸುತ್ತೋಲೆಯಲ್ಲಿ ಸೂಚಿಸಿರುವಂತೆ ತಮ್ಮ ಅಧೀನ ಶಾಖಾಧಿಕಾರಿಗಳ ಗಮನಕ್ಕೆ ತರುವಂತೆ ಸೂಚಿಸಿದೆ.
9. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿರವರುಗಳ ಆಪ್ತ ಕಾರ್ಯ ದರ್ಶಿಗಳಿಗೆ ಕಳುಹಿಸುತ್ತ, ಸುತ್ತೋಲೆಯ ಮಾಹಿತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿಯವರ ಗಮನಕ್ಕೆ ತರುವಂತೆ ಕೋರಿದೆ.
10. ವ್ಯ-1/ಪ್ರ.ಕ.